**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಜ್ಯ ಯೋಜನಾ ಮಂಡಳಿಗೆ ಸದಸ್ಯ ಕಾರ್ಯದರ್ಶಿಯ ನೇಮಕಾತಿ ಬಗ್ಗೆ

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಪಿಡಿ 25 ಎಸ್‌ಪಿಬಿ 2017 ದಿನಾಂಕ: 10.3.2017

2. ಅಧಿಸೂಚನೆ ಸಂಖ್ಯೆ: ಸಿಆಸುಇ 339 ಸೇಅಸೆ 2017 ದಿನಾಂಕ 13.7.2017

*****

ಪ್ರಸ್ತಾವನೆ:

ರೇಣುಕಾ ಚಿದಂಬರಂ, ಭಾ.ಆ.ಸೇ., ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರನ್ನು ಮೇಲೆ ಕ್ರ.ಸಂ.(1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಿಸಲಾಗಿದೆ.

ಶ್ರೀ ಚಕ್ರವರ್ತಿ ಮೋಹನ್, ಭಾ.ಆ.ಸೇ. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರನ್ನು ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹುದ್ದೆಯ ಸಮವರ್ತಿತ ಪ್ರಭಾರದಲ್ಲಿಡಲಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರನ್ನು ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಿಸುವ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಪಿಡಿ 25 ಎಸ್‌ಪಿಬಿ 2017 ದಿನಾಂಕ: 1.8.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರನ್ನು ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

1/8/17

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.

2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ರಾಜ್ಯ ಯೋಜನಾ ಮಂಡಳಿಯ ಎಲ್ಲಾ ಅಧಿಕಾರಿ/ಅಧಿಕಾರೇತರ ಸದಸ್ಯರುಗಳು.
4. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಮಾಹಿತಿ ಮತ್ತು ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ 1 ಎ.ಪಿ., ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು